ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: [illegible]

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ

ದಿನಾಂಕ : DATE : 04/03/2020

# ಗದ್ದಲದ ನಡುವೆಯೇ ಸಂವಿಧಾನ ಚರ್ಚೆ ಶುರು

## 40 ಪುಟಗಳ ಪ್ರಾಸ್ತಾವಿಕ ಭಾಷಣ ಓದಿದ ಸ್ಪೀಕರ್ | ಸಂವಿಧಾನ ರಕ್ಷಿಸಿ: ಕಾಂಗ್ರೆಸಿಗರ ಕೂಗು

• **ಕನ್ನಡಪ್ರಭ ವಾರ್ತೆ** ವಿಧಾನಸಭೆ 4-3-20

ಸ್ವಾತಂತ್ರ್ಯ ಹೋರಾಟಗಾರ ಎಚ್.ಎಸ್.ದೊರೆಸ್ವಾಮಿ ಅವರ ಬಗ್ಗೆ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ನೀಡಿರುವ ಹೇಳಿಕೆ ಕುರಿತ ಚರ್ಚೆಗೆ ಪಟ್ಟು ಮುಂದುವರೆಸಿ ಕಾಂಗ್ರೆಸ್ ಸದಸ್ಯರ ಪ್ರತಿಭಟನೆ ನಡುವೆಯೇ ವಿಧಾನಸಭೆಯಲ್ಲಿ ಮಂಗಳವಾರ ಸಂವಿಧಾನದ ಕುರಿತ ವಿಶೇಷ ಚರ್ಚೆ ಆರಂಭಿಸಲಾಯಿತು.

ಪ್ರತಿಭಟನೆ ಕೈಬಿಟ್ಟು ಸಂವಿಧಾನದ ಕುರಿತ ಚರ್ಚೆಯಲ್ಲಿ ಪಾಲ್ಗೊಳ್ಳುವಂತೆ ಮಾಡಿದ ಮನವಿಗೆ ಕಾಂಗ್ರೆಸ್ ಸದಸ್ಯರು ಸ್ಪಂದಿಸಲಿಲ್ಲ. ಕೊನೆಗೆ ಪ್ರತಿಭಟನೆ ನಡುವೆಯೇ ಚರ್ಚೆ ಆರಂಭಿಸಿದ ಸ್ಪೀಕರ್ ವಿಶ್ವೇಶ್ವರ ಹೆಗಡೆ ಕಾಗೇರಿ, 40 ಪುಟಗಳ ಪ್ರಾಸ್ತಾವಿಕ ಭಾಷಣ ಓದಿದರು. ಈ ವೇಳೆ ಸದನದ ಬಾವಿಯಲ್ಲಿದ್ದ ಕಾಂಗ್ರೆಸ್ ಸದಸ್ಯರು 'ರಕ್ಷಿಸಿ ರಕ್ಷಿಸಿ ಸಂವಿಧಾನ ರಕ್ಷಿಸಿ, ಸಂವಿಧಾನ ಗೌರವಿಸಿ, ಭಾರತ್ ಮಾತಾಕಿ ಜೈ, ಸಂವಿಧಾನ ವಿರೋಧಿಗಳಿಗೆ ಧಿಕ್ಕಾರ' ಎಂಬ ಘೋಷಣೆಗಳನ್ನು ಕೂಗಿ ಪ್ರತಿಭಟನೆ ಮುಂದುವರೆಸಿದರು.

ತಮ್ಮ ಭಾಷಣ ಮುಗಿದ ಬಳಿಕವೂ ಕಾಂಗ್ರೆಸ್ ಸದಸ್ಯರ ಪ್ರತಿಭಟನೆ ಮುಂದುವರೆದ ಹಿನ್ನೆಲೆಯಲ್ಲಿ ಸ್ಪೀಕರ್ ಅವರು ಕಲಾಪವನ್ನು ಬುಧವಾರಕ್ಕೆ ಮುಂದೂಡಿದರು. ಇದಕ್ಕೂ ಮುನ್ನ ಕಾಂಗ್ರೆಸ್ ನಡೆಯ ವಿರುದ್ಧ ತೀವ್ರ ಬೇಸರ ವ್ಯಕ್ತಪಡಿಸಿದ ಸ್ಪೀಕರ್ 'ಕಾಂಗ್ರೆಸ್ ನಡೆದುಕೊಂಡ ರೀತಿ ರಾಜ್ಯದ ಜನರಿಗೆ, ಸಂವಿಧಾನ ಮತ್ತು ಸದನಕ್ಕೆ ಅಗೌರವ ತರುವ ರೀತಿಯದ್ದು' ಎಂದು ವ್ಯಾಖ್ಯಾನಿಸಿದರು.

**ಅಂಬೇಡ್ಕರ್ ಹೋರಾಟದ ಹಾದಿ:** ಸಂವಿಧಾನದಲ್ಲಿ ವಿಶೇಷ ಸವಲತ್ತುಗಳನ್ನು ಕಲ್ಪಿಸುವ ಮುನ್ನ ದೇಶದಲ್ಲಿದ್ದ ಅಸ್ಪೃಶ್ಯತೆ, ಅಸಮಾನತೆಗಳನ್ನು ಹೋಗಲಾಡಿಸಲು ಜಾತಿ ವ್ಯವಸ್ಥೆ ವಿರುದ್ಧ ಅಂಬೇಡ್ಕರ್ ಅವರು ನಡೆಸಿದ ಹೋರಾಟದ ಹಾದಿ ತುಂಬಾ ಕ್ಲಿಷ್ಟಕರವಾಗಿತ್ತು. ಇವರ ಪರಿಶ್ರಮದಿಂದ ಶೋಷಿತರಿಗೆ ಮತ್ತು ಮಹಿಳೆಯರಿಗೆ ಸಾರ್ವಜನಿಕ ಪ್ರದೇಶಗಳಲ್ಲಿ ಪ್ರವೇಶಾವಕಾಶ, ಶಿಕ್ಷಣ ಮತ್ತು ಉದ್ಯೋಗ ಕ್ಷೇತ್ರದಲ್ಲಿ ವಿಶೇಷ ಪ್ರಾತಿನಿಧ್ಯ ನೀಡಲಾಯಿತು. ಶೋಷಿತ ಜನರ ಸಾಮಾಜಿಕ ಮತ್ತು ಆರ್ಥಿಕ ಸ್ಥಾನಮಾನಗಳನ್ನು ಸುಧಾರಿಸುವ ಮೂಕ ಮುಖ್ಯವಾಹಿನಿಗೆ ತರುವುದು ಅವರ ಉದ್ದೇಶವಾಗಿತ್ತು ಎಂದು ತಿಳಿಸಿದರು.

### ಸಂವಿಧಾನದ ಬಗ್ಗೆ ಚರ್ಚೆ ಏಕೆ?

**ಭಾ**ರತದ ಸಂವಿಧಾನ ಜಾರಿಗೆ ಬಂದು ಈ ವರ್ಷ 70 ವರ್ಷಗಳಾಗಿರುವ ಹಿನ್ನೆಲೆಯಲ್ಲಿ ಸಂವಿಧಾನದ ಕುರಿತು ಚರ್ಚಿಸಲು ಬಜೆಟ್ ಅಧಿವೇಶನದಲ್ಲಿ 2 ದಿನ ನಿಗದಿಪಡಿಸುವುದಾಗಿ ಸ್ಪೀಕರ್ ಈ ಹಿಂದೆ ಹೇಳಿದ್ದರು. ಅದರಂತೆ ವಿಧಾನಸಭೆಯಲ್ಲಿ ಮಂಗಳವಾರ ಚರ್ಚೆ ಆರಂಭವಾಗಿದ್ದು, ಬುಧವಾರವೂ ಮುಂದುವರೆಯಲಿದೆ.

### ಸಿಎಎ ವಿರೋಧಿ ನಿರ್ಣಯಕ್ಕೆ 'ಕೈ' ಮನವಿ

ಬೆಂಗಳೂರು: ರಾಜ್ಯದಲ್ಲಿ ಪೌರತ್ವ ತಿದ್ದುಪಡಿ ಕಾಯಿದೆ (ಸಿಎಎ) ಜಾರಿಗೆ ಅವಕಾಶ ನೀಡದಂತೆ ವಿಧಾನ ಪರಿಷತ್‌ನಲ್ಲಿ ನಿರ್ಣಯ ಕೈಗೊಳ್ಳಬೇಕು ಎಂದು ಪರಿಷತ್‌ನ ಕಾಂಗ್ರೆಸ್ ಪಕ್ಷದ ಸದಸ್ಯರು ಸಭಾಪತಿಗಳಿಗೆ ಪತ್ರದ ಮೂಲಕ ಮನವಿ ಮಾಡಿದ್ದಾರೆ.

ಈ ಮನವಿ ಪತ್ರಕ್ಕೆ ಕಾಂಗ್ರೆಸ್ ಪಕ್ಷದ 5 ಸದಸ್ಯರು ಸಹಿ ಮಾಡಿದ್ದು, ಬುಧವಾರ ಪ್ರಸ್ತಾಪವಾಗುವ ಸಾಧ್ಯತೆಯಿದೆ.